# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1801 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಅಬ್ದುಲ್ ಜಬ್ಬರ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23-03-2026 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತಜ್ಞ ವೈದ್ಯರ ನೇಮಕಾತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಉಳಿಯುವ ವೈದ್ಯಾಧಿಕಾರಿ/ಇತರೆ ಸಿಬ್ಬಂದಿಗಳನ್ನು ಭರ್ತಿ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ಇಲಾಖೆಯಲ್ಲಿ ಖಾಲಿಯಿರುವ 120 ತಜ್ಞ ವೈದ್ಯರು ಮತ್ತು 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ : ಆಇ 625 ವೆಚ್ಚ-5/2024, ದಿನಾಂಕ:06.06.2024ರಲ್ಲಿ ಸಹಮತಿ ನೀಡಿದ್ದು, ಅದರಂತೆ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ.<br><br>2. The Karnataka compulsory service by candidates completed Medical courses Act, 2012 ಹಾಗೂ ಕಾಲಕಾಲಕ್ಕೆ ಮಾಡಲಾದ ತಿದ್ದುಪಡಿ ಕಾಯ್ದೆ ಹಾಗೂ ಇದರಡಿ ರಚಿಸಲಾದ ನಿಯಮದಡಿ ವೈದ್ಯಕೀಯ ಕೋರ್ಸ್, ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ನ್ನು ಯಾಶಸ್ವಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ, ಹುದ್ದೆಗಳ ಲಭ್ಯತೆ ಆಧಾರದ ಮೇಲೆ ಒಂದು ವರ್ಷದ ಕಡ್ಡಾಯ ಸೇವೆಗೆ ನೇಮಿಸಲಾಗುತ್ತಿದೆ.<br><br>3. ಆದೇಶ ಸಂಖ್ಯೆ : ಆಕುಕ 619 ಹೆಚ್‌ಎಸ್‌ಹೆಚ್ 2022, ದಿನಾಂಕ : 17/01/2024 ಹಾಗೂ 11/03/2024ರಲ್ಲಿ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕೆಲವೊಂದು ಷರತ್ತುಗಳಿಗೆ ಒಳಪಡಿಸಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ನೀಡಲಾಗಿದೆ.<br><br>4. ಸುತ್ತೋಲೆ ಸಂಖ್ಯೆ : ಆಕುಕ 21 ಹೆಚ್‌ಎಸ್‌ಹೆಚ್ 2025, ದಿನಾಂಕ : 08/01/2025 ಮತ್ತು ಸೇರ್ಪಡೆ ಸಂಖ್ಯೆ : HFW/1/PRS/2025, ದಿನಾಂಕ : 25/01/2025 ಮತ್ತು ಪತ್ರ ದಿನಾಂಕ : 29/01/2025ರಲ್ಲಿ ಒಟ್ಟಾರೆಯಾಗಿ 250 ಮಿತಿಯಲ್ಲಿ ಅಗತ್ಯಕ್ಕನುಗುಣವಾಗಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ತುರ್ತು ಚಿಕಿತ್ಸಾ ವೈದ್ಯಾಧಿಕಾರಿ/ಹಿರಿಯ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ |
| ಆ) | ನರ್ಸ್ ಮತ್ತು ಪ್ಯಾರಾ ಮೆಡಿಕಲ್ ಸಿಬ್ಬಂದಿ ನೇಮಕಾತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | |

| | | |
|---|---|---|
| | | ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>5. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ವೃಂದದಲ್ಲಿ ಖಾಲಿ ಇರುವ ವಿವಿಧ 320 ಅರೆ ವೈದ್ಯಕೀಯ ಹುದ್ದೆಗಳನ್ನು ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ 558 ಅರೆ ವೈದ್ಯಕೀಯ ಹುದ್ದೆಗಳ ಭರ್ತಿಗಾಗಿ ಅಧಿಸೂಚನೆ ಸಂಖ್ಯೆ : ಆಕುಕ 709 ಹೆಚ್‌ಎಸ್‌ಎಂ 2017, ದಿನಾಂಕ : 17/05/2022ರಲ್ಲಿ ವಿಶೇಷ ನೇಮಕಾತಿ ಸಮಿತಿಯನ್ನು ರಚಿಸಲಾಗಿದೆ. ಅದರನ್ವಯ ಮೈಕ್ರೋಬಯಾಲಜಿಸ್ಟ್ ಹುದ್ದೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಯು ದಾಖಲಾಗಿದೆ. ಕಲ್ಯಾಣ ಕರ್ನಾಟಕ ವೃಂದದ ಸೈಕ್ಯಾಟ್ರಿಕ್ ಸೋಷಿಯಲ್ ವರ್ಕರ್-01 ಹಾಗೂ ಸಹಾಯಕ ಕೀಟ ಶಾಸ್ತ್ರಜ್ಞರು-01 ಹುದ್ದೆಗೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳ ಪೂರ್ವಾಪರ ಗುಣ ನಡತೆ ಪೊಲೀಸ್ ವರದಿ, ಅಂಕಪಟ್ಟಿ ನೈಜತೆ, ಸಿಂಧುತ್ವ ಪ್ರಮಾಣ ಪತ್ರದ ವರದಿಗಳನ್ನು ಸ್ವೀಕರಿಸಿದ ನಂತರ ನೇಮಕಾತಿ ಆದೇಶ ನೀಡುವುದು ಬಾಕಿಯಿದೆ. ಇದನ್ನು ಹೊರತುಪಡಿಸಿ, ಉಳಿದ ಅರೆ ವೈದ್ಯಕೀಯ ಹುದ್ದೆಗಳ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದೆ.<br><br>6. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 1250 ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹಾಗೂ 300 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳ ಭರ್ತಿ ಮಾಡಲು ಪರಿಶೀಲಿಸಲಾಗುತ್ತಿದೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಿಧನ, ನಿವೃತ್ತಿ, ರಾಜೀನಾಮೆ, ಸ್ವ-ಇಚ್ಛಾ ನಿವೃತ್ತಿ ಮತ್ತು ಇತರೆ ಕಾರಣಗಳಿಂದ ಖಾಲಿಯಾಗುವ ವೈದ್ಯಾಧಿಕಾರಿ ಹುದ್ದೆಗಳನ್ನು ಕಾಲಕಾಲಕ್ಕೆ ನೇರ ನೇಮಕಾತಿ, ಗುತ್ತಿಗೆ/ಹೊರಗುತ್ತಿಗೆ ಆಧಾರದ ನೇಮಕಾತಿ, ಕಡ್ಡಾಯ ಸೇವೆ, ಪದೋನ್ನತಿ, ವರ್ಗಾವಣೆ ಮೂಲಕ ಭರ್ತಿ ಮಾಡುವ ಹುದ್ದೆಗಳ ಮೂಲಕ ಕೊರತೆಯಾಗದಂತೆ ಕ್ರಮವಹಿಸಲಾಗುತ್ತಿದೆ. |
| ಇ) | ಗ್ರಾಮೀಣ ಸೇವೆಗಾಗಿ ವೈದ್ಯರನ್ನು ಪ್ರೋತ್ಸಾಹಿಸಲು ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಯಾವುವು; | ಗ್ರಾಮೀಣ ಸೇವೆಗಾಗಿ ವೈದ್ಯರನ್ನು ಪ್ರೋತ್ಸಾಹಿಸಲು ಸರ್ಕಾರದಿಂದ ಯಾವುದೇ ಸೌಲಭ್ಯಗಳನ್ನು ನೀಡುತ್ತಿಲ್ಲ. ಆದರೆ ಇಲಾಖೆಯಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಯಾಗಿ ನೇಮಕಗೊಂಡು 06 ವರ್ಷಗಳ ಸೇವೆಯನ್ನು ಪೂರೈಸಿದ ನಂತರ ಆದೇಶ ಸಂಖ್ಯೆ: ಆಕುಕ/449/ಹೆಚ್ ಎಸ್ ಹೆಚ್/2020, ದಿನಾಂಕ:21.12.2020ರನ್ವಯ ವಿಶೇಷ ಭತ್ಯೆಗಳನ್ನು ಪರಿಷ್ಕರಿಸಿ ನೀಡಲಾಗುತ್ತಿದೆ. |

<table>
<tr>
<td>(ಈ)</td>
<td>ಬಿಪಿಎಲ್ ಕುಟುಂಬಗಳಿಗೆ ಉಚಿತ ಚಿಕಿತ್ಸೆ ಸೌಲಭ್ಯಗಳನ್ನು ಎಲ್ಲೆಲ್ಲಿ ಹೇಗೆ ನೀಡಲಾಗುತ್ತಿದೆ; ಖಾಸಗಿ ಆಸ್ಪತ್ರೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದಗಳು ಯಾವುವು?</td>
<td>ಕರ್ನಾಟಕ ರಾಜ್ಯದಲ್ಲಿ ಸಂಯೋಜಿತ "ಆಯುಷ್ಮಾನ್ ಭಾರತ್-ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನಾ-ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ" ಯೋಜನೆಯನ್ನು ದಿನಾಂಕ: 31.10.2018ರಿಂದ ಅನುಷ್ಠಾನಗೊಳಿಸಲಾಗಿದೆ. ಈಗಾಗಲೇ ಅಸ್ತಿತ್ವದಲ್ಲಿರುವ ಎಲ್ಲಾ ಆರೋಗ್ಯ ಯೋಜನೆಗಳ ಫಲಾನುಭವಿಗಳು ಒಳಗೊಳ್ಳುವ ಏಕೈಕ ಸಾರ್ವತ್ರಿಕ ಆರೋಗ್ಯ ರಕ್ಷಣೆ ಯೋಜನೆ ಇದಾಗಿದೆ.<br><br>ಫಲಾನುಭವಿಗಳು ನೊಂದಾಯಿತ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳಲು ಈ ಕೆಳಕಂಡಂತೆ ಮಾನದಂಡಗಳನ್ನು ನಿಗದಿಪಡಿಸಲಾಗಿದೆ:<br><br>• ಪಿ.ಹೆಚ್.ಹೆಚ್ (PHH) ಹಾಗೂ ಆಧಾರ್ ಕಾರ್ಡ್ ಹೊಂದಿರುವ ಫಲಾನುಭವಿಯ ಕುಟುಂಬದವರನ್ನು ಅರ್ಹತಾ ರೋಗಿ ಎಂದು ಪರಿಗಣಿಸಲಾಗುತ್ತದೆ. ಆಧಾರ್ ಕಾರ್ಡ್ ಜೊತೆಗೆ ಅದ್ಯತಾ ಮನೆ ಮಂದಿ (PHH) ಕಾರ್ಡ್ ಹೊಂದಿರುವ ವ್ಯಕ್ತಿಯು, ಯೋಜನೆಯಡಿ ಪ್ರತಿ ಕುಟುಂಬಕ್ಕೆ ವರ್ಷಕ್ಕೆ ರೂ. 5 ಲಕ್ಷದವರೆಗೆ ಎಲ್ಲಾ ನೋಂದಾಯಿತ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಯನ್ನು ಪಡೆಯಬಹುದು.<br><br>ಚಿಕಿತ್ಸಾ ವಿಧಾನಗಳು:<br><br>• ಯೋಜನೆಯು 1650 ಚಿಕಿತ್ಸಾ ಪ್ಯಾಕೇಜ್ ಗಳನ್ನು ಒಳಗೊಂಡಿದೆ.<br><br>• 294 ಸಾಮಾನ್ಯ ದ್ವಿತೀಯ ಹಂತದ ಚಿಕಿತ್ಸಾ ವಿಧಾನಗಳು ಸಾರ್ವಜನಿಕ ಆರೋಗ್ಯ ಸಂಸ್ಥೆಗಳಿಗೆ ಮಾತ್ರ ಸೀಮಿತವಾಗಿರುತ್ತದೆ.<br><br>• 251 ಕ್ಲಿಷ್ಟಕರ ದ್ವಿತೀಯ ಹಂತದ ಚಿಕಿತ್ಸಾ ವಿಧಾನಗಳು, 934 ತೃತೀಯ ಹಂತದ ಚಿಕಿತ್ಸಾ ವಿಧಾನಗಳು ಮತ್ತು 171 ತುರ್ತು ಚಿಕಿತ್ಸಾ ವಿಧಾನಗಳನ್ನು ಸಾರ್ವಜನಿಕ ಆರೋಗ್ಯ ಸಂಸ್ಥೆ ಮತ್ತು ನೊಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಬಹುದಾಗಿದೆ.<br><br>ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನಾ-ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ" ಯೋಜನೆಯಡಿಯಲ್ಲಿ 541 ಖಾಸಗಿ ಆಸ್ಪತ್ರೆಗಳನ್ನು ನೋಂದಾವಣೆ ಮಾಡಿಕೊಂಡು ಬಿಪಿಎಲ್ ಕುಟುಂಬದ ಫಲಾನುಭವಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ.</td>
</tr>
</table>

HFW/22/HSD/2026

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು